ಆ) ಕಾರ್ಖಾನೆಯ ಆರ್ಥಿಕ ಪರಿಸ್ಥಿತಿಯನ್ನು ಅವಲೋಕಿಸಿ LROT (Lease-Rehabilitate operate-Transfer) Scheme ನಡಿಯಲ್ಲಿ 22 ವರ್ಷಗಳ ಅವಧಿಗೆ ಗುತ್ತಿಗೆ ನೀಡಲು ತೀರ್ಮಾನಿಸಿದೆ.

721(867) ಶ್ರೀ ಮಹಾಗುಂಡಪ್ಪ ಕಲ್ಲಪ್ಪ ಪಟ್ಟಣಶೆಟ್ಟಿ (ಬಾದಾಮಿ) : ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನೀರಬೂದಿಹಾಳ ಗ್ರಾಮಕ್ಕೆ 110 ಕೆ.ವಿ. ಸ್ಟೇಷನ್ ಮಂಜೂರಾಗಿದೆಯೇ;

ಆ) ಹಾಗಿದ್ದಲ್ಲಿ ಟೆಂಡರ್ ಕರೆಯುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು) :

ಅ) ಹೌದು. ಮಂಜೂರಾಗಿರುತ್ತದೆ.

ಆ) ಸದರಿ ಕಾಮಗಾರಿಗೆ ಈಗಾಗಲೇ ಅಂದರೆ ದಿನಾಂಕ: 7-4-2006 ರಂದು ಟೆಂಡರ್‌ಗಳನ್ನು ಕರೆಯಲಾಗಿದೆ.

722(869) ಶ್ರೀ ಮಹಾಗುಂಡಪ್ಪ ಕಲ್ಲಪ್ಪ ಪಟ್ಟಣಶೆಟ್ಟಿ (ಬಾದಾಮಿ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಐತಿಹಾಸಿಕ ಸ್ಥಳವಾದ ಬದಾಮಿ ಅಭಿವೃದ್ಧಿಗಾಗಿ ರೂ. 25 ಕೋಟಿ ಮಂಜೂರು ಮಾಡುವುದಾಗಿ ಸರ್ಕಾರ ಸದನದಲ್ಲಿ ಹೇಳಿಕೆ ನೀಡಿರುವುದು ನಿಜವೆ;

ಆ) ಹಾಗಿದ್ದಲ್ಲಿ ಅಭಿವೃದ್ಧಿಯ ಕಾರ್ಯಕ್ರಮಗಳೇನು;

ಇ) ಅಭಿವೃದ್ಧಿ ಕಾರ್ಯಕ್ರಮಗಳನ್ನು ಎಂದಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಗಳು) :

ಅ) ಸದನದಲ್ಲಿ ಹೇಳಿಕೆ ನೀಡಿರುವ ಬಗ್ಗೆ ನಿರ್ದಿಷ್ಟ ಮಾಹಿತಿ ಇರುವುದಿಲ್ಲ.

ಆ) ಉತ್ತರ ಕರ್ನಾಟಕ ಅಭಿವೃದ್ಧಿ ಯೋಜನೆಯಡಿಯಲ್ಲಿ ಬದಾಮಿ ಪಟ್ಟಣವನ್ನು ಅಳವಡಿಸಲಾಗಿದ್ದು, ವಿವಿಧ ಅಭಿವೃದ್ಧಿ ಕೆಲಸಕ್ಕಾಗಿ ರೂ. 33.81 ಕೋಟಿ ರೂಪಾಯಿಗಳ ಒಂದು ಯೋಜನೆಯನ್ನು ತಯಾರಿಸಿದ್ದು, ಅದರಲ್ಲಿ ರಸ್ತೆಗೆ, ನೀರು ಸರಬರಾಜು, ದೊಡ್ಡ ಚರಂಡಿ ಮೋರಿಗಳನ್ನು, ಪ್ರವಾಸೋದ್ಯಮ ಚಟುವಟಿಕೆಗಳನ್ನು ಹಾಗೂ ಬಡತನ ನಿರ್ಮೂಲನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಇ) ಸದರಿ ಕಾರ್ಯಕ್ರಮಗಳನ್ನು ADB ಸಂಗಡ ಒಪ್ಪಂದವಾದ ಮೇಲೆ ಆದಷ್ಟು ಶೀಘ್ರವಾಗಿ ಪ್ರಾರಂಭಿಸಲಾಗುವುದು.